ಓ.ಎಸ್. 374/2019
ಪಿ.ಡಬ್ಲ್ಯೂ-3

ದಿನಾಂಕಃ **05.11.2025**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

<u>ಪಾಟೀ ಸವಾಲುಃ 3 ರಿಂದ 8 ನೇ ಪ್ರತಿವಾದಿಗಳ ಪರ ಶ್ರೀ ಎಂ.ಎಂ. ವಕೀಲರಿಂದಃ</u>

ದಾವಾ ಸ್ವತ್ತನ್ನು ದೊಡ್ಡ ಕದರಪ್ಪನವರು ಖರೀದಿ ಮಾಡಿರುತ್ತಾರೆ ನಂತರ ಖದರಪ್ಪನವರಿಗೆ ಬಂದಿರುತ್ತದೆ. ದಾವಾ ಸ್ವತ್ತಿನಲ್ಲಿ ದೊಡ್ಡ ಕದರಪ್ಪ ಮತ್ತು ಅವರ ಅಣ್ಣ-ತಮ್ಮಂದಿರು ಜಂಟಿ ಸ್ವಾಧೀನದಲ್ಲಿರುತ್ತಾರೆ ಎಂದು ಸೂಚಿಸಿದ್ದಕ್ಕೆ ಸಾಕ್ಷಿಯು ಕದರಪ್ಪ ಮತ್ತು ಅವರ ಮಕ್ಕಳಿಗೆ ಮಾತ್ರ ಸೇರಿರುತ್ತದೆ ಎಂದು ಉತ್ತರಿಸಿರುತ್ತಾರೆ. ದಾವಾ ಸ್ವತ್ತಿನ ಸರ್ವೆ ನಂ. 90/2. ದಾವಾ ಸ್ವತ್ತಿನ ವಿಸ್ತೀರ್ಣ 6 ಎಕರೆ 22 ಗುಂಟೆ ಇರುತ್ತದೆ. ಕದರಪ್ಪ ತೀರಿಕೊಂಡ ದಿನಾಂಕ ನನಗೆ ಗೊತ್ತಿರುವುದಿಲ್ಲ.

**2.** ದಾವಾ ಸ್ವತ್ತಿನಲ್ಲಿ ಇಂದಿಗೂ ವಾದಿಗಳು ಮತ್ತು ಪ್ರತಿವಾದಿಗಳು ಜಂಟಿ ಸ್ವಾಧೀನಾನುಭವದಲ್ಲಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. 3 ರಿಂದ 8 ನೇ ಪ್ರತಿವಾದಿಗಳ ಹೆಸರುಗಳನ್ನು ಹೇಳಲು ಆಗುವುದಿಲ್ಲ. ದಾವಾ ಸ್ವತ್ತಿನಲ್ಲಿ ಯಾರು ಸಾಗುವಳಿ ಮಾಡುತ್ತಿರುತ್ತಾರೆಂದು ನಾನು ನೋಡದೇ ಇದ್ದರೂ ಸಹ ವಾದಿಗಳ ಹೇಳಿಕೆಯ ಮೇರೆಗೆ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

**3.** ದಾವಾ ಸ್ವತ್ತಿನ ದಕ್ಷಿಣ ದಿಕ್ಕಿನಲ್ಲಿ ನನಗೆ ಸರ್ವೆ ನಂ. 9 ರಲ್ಲಿ ಜಮೀನು ಇರುತ್ತದೆ. ದಾವಾ ಸ್ವತ್ತು ವಾದಿಗಳು ಮತ್ತು ಪ್ರತಿವಾದಿಗಳ ಒಟ್ಟು ಕುಟುಂಬದ ಆಸ್ತಿಯಾಗಿದ್ದರೂ ಸಹ ವಾದಿಗಳ ಹೇಳಿಕೆಯ ಮೇರೆಗೆ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

**4.** ದಾವಾ ಸ್ವತ್ತಿನ ಪಹಣಿ ನಾನು ನೋಡಿರುತ್ತೇನೆ ಆದರೆ ಯಾರ ಹೆಸರಿನಲ್ಲಿರುತ್ತದೆ ಎಂದು ಈಗ ಹೇಳಲು ಆಗುವುದಿಲ್ಲ. ಪ್ರಸ್ತುತ 3 ರಿಂದ 8 ನೇ ಪ್ರತಿವಾದಿಗಳ ಹೆಸರಿನಲ್ಲಿ ದಾವಾ ಸ್ವತ್ತಿನ ಖಾತೆ ಇರುತ್ತದೆ ಎಂದು ಸೂಚಿಸಿದ್ದಕ್ಕೆ ಸಾಕ್ಷಿಯು ಅವರು ಮಾಡಿಸಿಕೊಂಡಿರಬಹುದು ಅದಕ್ಕೆ ಇವರು ನ್ಯಾಯಾಲಯಕ್ಕೆ ಬಂದಿರುತ್ತಾರೆ ಎಂದು ಉತ್ತರಿಸಿರುತ್ತಾರೆ. ದಾವಾ ಸ್ವತ್ತಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ವಾದಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ